ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ,
ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 23–10–2019

# ಪತ್ರಿಕಾ ಆಮಂತ್ರಣ

1. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು, ಕೃಷಿ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ **"ಕೃಷಿಮೇಳ – 2019"**

   'ನಿಖರ ಕೃಷಿ ಸುಸ್ಥಿರ ಅಭಿವೃದ್ಧಿ'

   ಉದ್ಘಾಟನೆ:

   ಶ್ರೀ ಬಿ.ಎಸ್. ಯಡಿಯೂರಪ್ಪ,
   ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

   ಮುಖ್ಯ ಅತಿಥಿಗಳು:

   ಶ್ರೀ ಲಕ್ಷಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿ
   ಸಾರಿಗೆ ಹಾಗೂ ಕೃಷಿ ಸಚಿವರು, ಕರ್ನಾಟಕ ಸರ್ಕಾರ ಮತ್ತು ಸಹ ಕುಲಾಧಿಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

   ಅಧ್ಯಕ್ಷತೆ:

   ಶ್ರೀ ಕೃಷ್ಣ ಬೈರೇಗೌಡ,
   ಶಾಸಕರು, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ

   ದಿನಾಂಕ: 24–11–2019 ಗುರುವಾರ, ಸಮಯ: ಬೆಳಿಗ್ಗೆ 11.30 ಗಂಟೆಗೆ
   ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.) ಬೆಂಗಳೂರು.

   ವಿ.ಸೂ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕಬ್ಬನ್ ಉದ್ಯಾನವನದಲ್ಲಿರುವ ಬೆಂಗಳೂರು ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಡಾ. ಕೆ. ಶಿವರಾಮು ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು
ಮೊಬೈಲ್ ನಂ. 9972035456
ಡಾ. ಎಂ.ಎ. ಮೂರ್ತಿ, ಸಹಾಯಕ ಪ್ರಾಧ್ಯಾಪಕರು (ಗುತ್ತಿಗೆ)
ಮೊಬೈಲ್ ಸಂಖ್ಯೆ : 9535355329
ಶ್ರೀ ಶ್ರೀನಿವಾಸಪ್ಪ, ವಾಹನ ಚಾಲಕರು
ಮೊಬೈಲ್ ಸಂಖ್ಯೆ : 9449493146

# ಪತ್ರಿಕಾ ಪ್ರಕಟಣೆ

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಹಾಗೂ ಮೈಸೂರು ಮತ್ತು ಕೊಡಗು ಜಿಲ್ಲೆಯ ಉಸ್ತುವಾರಿ ಸಚಿವರೂ ಆದ ಶ್ರೀ ವಿ. ಸೋಮಣ್ಣ ಅವರು ಅಕ್ಟೋಬರ್ 24 ರಿಂದ 27 ರವರೆಗೆ ಮೈಸೂರು ಮತ್ತು ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಕ್ಟೋಬರ್ 27 ರಂದು ನಗರಕ್ಕೆ ಹಿಂದಿರುಗಲಿದ್ದಾರೆ.

## ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚನೆ ಸಂಖ್ಯೆ ಖ(2)3567/2017-18/ಕಖಅ ದಿನಾಂಕ: 19-02-2018 ಮತ್ತು ತಿದ್ದುಪಡಿ ಅಧಿಸೂಚನೆ ಸಂಖ್ಯೆ : ಖ(2)1762/2019-20/ಕಖಅ ದಿನಾಂಕ: 25-09-2019 ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದಲ್ಲಿನ ಫಿಟ್ಟರ್ ವೃತ್ತಿಯ ಕಿರಿಯ ತರಬೇತಿ ಅಧಿಕಾರಿ 289+59 (ಹೈ.ಕ.) ಹುದ್ದೆಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು ದಿನಾಂಕ: 04-11-2019 ರಿಂದ 08-11-2019 ರವರೆಗೆ ನಿಗದಿಪಡಿಸಲಾಗಿದ್ದು, ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ತ್ವರಿತ ಅಂಚೆ ಮೂಲಕ ರವಾನಿಸಲಾಗಿರುತ್ತದೆ. ದಿನಾಂಕವಾರು ಅಭ್ಯರ್ಥಿಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ

ಅಂತರ್ಜಾಲದಲ್ಲಿ http://kpsc.kar.nic.in ಪ್ರಕಟಿಸಲಾಗಿದ್ದು, ನಿಗದಿತ ದಿನಾಂಕದಂದು ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ಹಾಜರಾಗತಕ್ಕದ್ದು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 23 (ಕರ್ನಾಟಕ ವಾರ್ತೆ)

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ದಿಮೆ ಸಚಿವ ಶ್ರೀ ಜಗದೀಶ್ ಶೆಟ್ಟರ ಅವರು ಅಕ್ಟೋಬರ್ 24 ರಂದು ಹುಬ್ಬಳ್ಳಿಗೆ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.